## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1214 (1151) |
| ಸದಸ್ಯರ ಹೆಸರು | ಶ್ರೀ ಆರ್.ಬಿ. ತಿಮ್ಮಾಪುರ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 16.03.2021. |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಾಗಲಕೋಟೆ ಜಿಲ್ಲೆಯಲ್ಲಿ ಲಭ್ಯವಿರುವ ಡಿಎಂಆರ್ ಅನುದಾನ ಎಷ್ಟು: | ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಯಾವುದೇ ಫಂಡ್ ಎಂದು ಸಂಗ್ರಹಿಸುತ್ತಿಲ್ಲ.<br>ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2016 ರನ್ವಯ ಗಣಿಗುತ್ತಿಗೆ ಹಾಗೂ ಕಲ್ಲುಗಣಿ ಗುತ್ತಿಗೆದಾರರಿಂದ ರಾಜಧನದ ಮೇಲೆ ಅನ್ವಯವಾಗುವಂತೆ ಶೇ.30 ಹಾಗೂ ಶೇ.10 ರಂತೆ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ನಿಧಿ (ಡಿಎಂಎಫ್) ಎಂದು ಇಲಾಖೆಯಲ್ಲಿ ಸಂಗ್ರಹಿಸಲಾಗುತ್ತಿದೆ.<br>ಬಾಗಲಕೋಟೆ ಜಿಲ್ಲೆಯಲ್ಲಿ 2015-16 ರಿಂದ ಜನವರಿ 2021 ಅಂತ್ಯದವರೆಗೆ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ಗೆ ರೂ.69.69 ಕೋಟಿಗಳು ಸಂಗ್ರಹವಾಗಿರುತ್ತದೆ. |
| ಆ) | ಸದರಿ ಅನುದಾನದ ಮೂಲಕ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ: | ಬಾಗಲಕೋಟೆ ಜಿಲ್ಲೆಯ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ನಿಧಿಯಡಿಯಲ್ಲಿ ಕುಡಿಯುವ ನೀರಿನ ಪೂರೈಕೆಗೆ 23, ಆರೋಗ್ಯ ಕ್ಷೇತ್ರಕ್ಕೆ 06, ಶಿಕ್ಷಣ ಕ್ಷೇತ್ರಕ್ಕೆ 134, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಗೆ 13, ವಿಕಲಚೇತನ ಮತ್ತು ಹಿರಿಯ ನಾಗರೀಕರಿಗೆ 04, ನೈರ್ಮಲ್ಯತೆಗೆ 12 ಮೂಲಭೂತ ಸೌಕರ್ಯ 63, ಇತರೆ 04 ಸೇರಿ ಒಟ್ಟು 259 ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. |
| ಇ) | ಇದರಲ್ಲಿ ಅವ್ಯವಹಾರದ ಬಗ್ಗೆ ದೂರುಗಳು ಬಂದಿದೆಯೇ: ಬಂದಿದ್ದಲ್ಲಿ. ಕೈಗೊಂಡಿರುವ ಕ್ರಮಗಳೇನು? | ಬಾಗಲಕೋಟೆ ಜಿಲ್ಲೆಯ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ನಿಧಿಯಡಿ ಕೈಗೊಂಡಿರುವ ಪ್ರಧಾನ ಮಂತ್ರಿ ಖನಿಜ ಕ್ಷೇತ್ರ ಕಲ್ಯಾಣ ಯೋಜನೆ (ಪಿಎಂಎಕೆಕೆಕೆವೈ) ಯೋಜನೆಗಳನ್ನು ನಿಯಮಾನುಸಾರ ಕೈಗೊಳ್ಳುತ್ತಿದ್ದು, ಅವ್ಯವಹಾರದ ಬಗ್ಗೆ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |

ಸಂಖ್ಯೆ ಸಿಐ 178 ಎಂಎಂಎನ್ 2021

(ಮುರುಗೇಶ್ ಆರ್. ನಿರಾಣಿ)

ಗಣಿ ಮತ್ತು ಭೂವಿಜ್ಞಾನ ಸಚಿವರು.